ಸಂಪುಟ : 11 ಸಂಚಿಕೆ: 37 ಪುಟ : 4+2 ಬೆಲೆ: 3.00 ಮಂಗಳವಾರ ಮಾರ್ಚ್ 10 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 37 Pages : 4+2 Price : 3.00 Tuesday March 10 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಬೆಂಕಿ ಅವಘಡ-ರೈತರ ಹೊಟ್ಟು ಮೇವು, ಕೃಷಿ ಉಪಕರಣಗಳು ಭಸ್ಮ



■ ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ

ಸಮೀಪದ ಅಡರಕಟ್ಟಿ ಗ್ರಾಮದ ಹತ್ತಿರ ಸೋಮವಾರ ಜಮೀನಿನಲ್ಲಿದ್ದ ಕಸಕ್ಕೆ ಯಾರೋ ಹಚ್ಚಿದ ಬೆಂಕಿ ಆವರಿಸಿಕೊಂಡು ರೈತರ ಹೊಟ್ಟು-ಮೇವು, ಕೃಷಿ ಪರಿಕರಗಳು ಹಾಗೂ ನೀರಾವರಿ ಸ್ಪಿಂಕ್ಲರ್ ಸೆಟ್ ಸುಟ್ಟು ಅಪಾರ ಹಾನಿ ಸಂಭವಿಸಿದೆ.

ಗ್ರಾಮದ ರೈತರಾದ ಯಲ್ಲಪ್ಪ ರೊಳ್ಳಿ, ಅಶೋಕ ರೊಳ್ಳಿ, ನಿಂಗಪ್ಪ ಚಿಕ್ಕಣ್ಣವರ, ಉಮೇಶ ಚಿಕ್ಕಣ್ಣವರ, ಬಸವರಾಜ ಕಳ್ಳಿಮನಿ ಸೇರಿದಂತೆ ಇತರ ರೈತರು ಜಾನುವಾರುಗಳಿಗಾಗಿ ಸಂಗ್ರಹಿಸಿಟ್ಟಿದ್ದ ಕಡಲೆ, ಶೇಂಗಾ ಹಾಗೂ ಮೆಕ್ಕೆಜೋಳದ ಹೊಟ್ಟು-ಮೇವು ಮತ್ತು ನೀರಾವರಿ ಉಪಕರಣಗಳು ಬೆಂಕಿ ಕೆನ್ನಾಲಿಗೆಗೆ ಆಹುತಿಯಾಗಿ ಸುಟ್ಟು ಕರಕಲಾಗಿದೆ.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿಗಳು ರೈತರ ಸಹಕಾರದೊಂದಿಗೆ ಬೆಂಕಿ ನಂದಿಸಿ ಹೆಚ್ಚಿನ ಹಾನಿ ಸಂಭವಿಸುವುದನ್ನು ತಪ್ಪಿಸಿದ್ದಾರೆ.

## ಬಿಸಿಲಿನ ತಾಪಕ್ಕೆ ಪರಿಹಾರ: ಬೀದಿ ಬದಿ ವ್ಯಾಪಾರಸ್ಥರಿಂದ ನೀರಿನ ಅರವಟ್ಟಿಗೆ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬೇಸಿಗೆಯ ತಾಪದಿಂದ ಬಳಲುತ್ತಿರುವ ಜನರ ದಾಹ ತಣಿಸಲು ನೀರಿನ ಅರವಟ್ಟಿಗೆ ಮಹತ್ವದ ಪಾತ್ರವಹಿಸುತ್ತದೆ ಎಂದು ಬೀದಿ ಬದಿ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಭೀಮಣ್ಣಾ ಕೋಳಿ ಹೇಳಿದರು.

ಪಟ್ಟಣದ ಮಾರುಕಟ್ಟೆ ಪ್ರದೇಶದಲ್ಲಿ ಬೀದಿ ಬದಿ ವ್ಯಾಪಾರಸ್ಥರ ಸಂಘದ ವತಿಯಿಂದ ಸ್ಥಾಪಿಸಲಾದ ನೀರಿನ ಅರವಟ್ಟಿಗೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಬೇಸಿಗೆಯ ಬಿಸಿಲಿಗೆ ಬಸವಳಿದ ಪಟ್ಟಣದ ಜನತೆ ಹಾಗೂ ಪ್ರಯಾಣಿಕರ ದಾಹ ತಣಿಸುವ ಉದ್ದೇಶದಿಂದ ಪ್ರತಿವರ್ಷವೂ ಸಂಘದ ವತಿಯಿಂದ ಈ ನೀರಿನ ಅರವಟ್ಟಿಗೆ ವ್ಯವಸ್ಥೆ ಮಾಡಲಾಗುತ್ತಿದೆ. ಸಾರ್ವಜನಿಕ ಸೇವೆಯ ಮನೋಭಾವದಿಂದ ಈ ಕಾರ್ಯವನ್ನು ಮುಂದುವರಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಜಗದೀಶ ಸಿದ್ದನಗೌಡರ, ಯಲ್ಲಪ್ಪ ತೆಂಬದಮನಿ, ರಾಜು ಹಡಪದ, ಸುರೇಶ್ ಮಟ್ಟಿ, ರವಿ ಮಾಡಳ್ಳಿ, ಶಿವಪ್ಪ ಹುಲಕೋಟಿ ಸೇರಿದಂತೆ ಸಂಘದ ಸದಸ್ಯರು ಉಪಸ್ಥಿತರಿದ್ದರು.

### ಶಿರಹಟ್ಟಿ-ಲಕ್ಷ್ಮೇಶ್ವರ ಗ್ರಾಮಗಳ ಮರುಹಂಚಿಕೆ; ಸಾರ್ವಜನಿಕರ ಅಲೆದಾಟಕ್ಕೆ ಬ್ರೇಕ್

# ತಾಲೂಕು ವ್ಯಾಪ್ತಿಯೇ ಇನ್ನು ಪೊಲೀಸ್ ಠಾಣಾ ವ್ಯಾಪ್ತಿ!

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕು ವಿಭಜನೆಯಾದ ಬಳಿಕ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳು ಪ್ರತ್ಯೇಕವಾಗಿದ್ದರೂ, ಕೆಲವು ಗ್ರಾಮಗಳು ಬೇರೆ ತಾಲೂಕಿನ ಪೊಲೀಸ್ ಠಾಣೆಗಳಿಗೆ ಒಳಪಟ್ಟಿದ್ದರಿಂದ ಸಾರ್ವಜನಿಕರು ಆಡಳಿತಾತ್ಮಕವಾಗಿ ಸಾಕಷ್ಟು ತೊಂದರೆ ಅನುಭವಿಸುತ್ತಿದ್ದರು. ಇದೀಗ ಈ ಸಮಸ್ಯೆಗೆ ಗೃಹ ಇಲಾಖೆ ಅಂತಿಮ ತೆರೆ ಎಳೆದಿದ್ದು, ಇನ್ನು ಮುಂದೆ ಆಯಾ ತಾಲೂಕು ವ್ಯಾಪ್ತಿಯೇ ಸಂಬಂಧಿತ ಪೊಲೀಸ್ ಠಾಣೆಯ ವ್ಯಾಪ್ತಿಯಾಗಲಿದೆ ಎಂದು ಆದೇಶ ಹೊರಡಿಸಿದೆ.

ತಾಲೂಕು ವಿಂಗಡಣೆಯಾದ ಬಳಿಕ







ಹಲವು ಗ್ರಾಮಗಳು ತಮ್ಮ ತಾಲೂಕಿನ ಹೊರಗಿನ ಪೊಲೀಸ್ ಠಾಣೆಗೆ ಸೇರಿದ್ದರಿಂದ ಜನರು ತಮ್ಮ ಕೆಲಸ-ಕಾರ್ಯಗಳಿಗಾಗಿ ಬೇರೆ ತಾಲೂಕಿಗೆ ತೆರಳಬೇಕಾಗುತ್ತಿತ್ತು. ಇದರಿಂದ ಸಾರ್ವಜನಿಕರಷ್ಟೇ ಅಲ್ಲದೆ ಪೊಲೀಸ್ ಅಧಿಕಾರಿಗಳಿಗೂ ಆಡಳಿತಾತ್ಮಕವಾಗಿ ತೊಂದರೆ ಉಂಟಾಗುತ್ತಿತ್ತು.

ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಈ ಸಮಸ್ಯೆಯನ್ನು ಸರ್ಕಾರದ ಗಮನಕ್ಕೆ ತಂದು ಸುಗಮ ಆಡಳಿತಕ್ಕಾಗಿ ಹೊಸ ವ್ಯವಸ್ಥೆ ಜಾರಿಗೆ ತರಲು ಮುಂದಾಗಿದ್ದರು. ಅದರಂತೆ ಇದೀಗ ಗ್ರಾಮಗಳನ್ನು ಸಂಬಂಧಿತ ತಾಲೂಕಿನ ಪೊಲೀಸ್ ಠಾಣೆಗಳ ವ್ಯಾಪ್ತಿಗೆ ಮರುಹಂಚಿಕೆ ಮಾಡಲಾಗಿದೆ.

1. ತಾಲೂಕಿನಲ್ಲೇ ಪೊಲೀಸ್ ಸೇವೆ ಪಡೆಯಲು ಅವಕಾಶ
2. ಸಾರ್ವಜನಿಕರ ಅನಗತ್ಯ ಓಡಾಟಕ್ಕೆ ಕಡಿವಾಣ
3. ಆಡಳಿತಾತ್ಮಕ ಕಾರ್ಯಗಳಿಗೆ ಸುಗಮತೆ
4. ಗ್ರಾಮಗಳ ಮರುಹಂಚಿಕೆಯಿಂದ ಪೊಲೀಸ್ ವ್ಯವಸ್ಥೆ ಸರಳ



"ಆಡಳಿತಾತ್ಮಕವಾಗಿ ಸಾರ್ವಜನಿಕರಿಗೆ ಅನುಕೂಲವಾಗುವ ಉದ್ದೇಶದಿಂದ ಆಯಾ ತಾಲೂಕುಗಳ ವ್ಯಾಪ್ತಿಯೇ ಇನ್ನು ಮುಂದೆ ಪೊಲೀಸ್ ಠಾಣೆಯ ವ್ಯಾಪ್ತಿಯಾಗಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು."

**– ರೋಹನ್ ಜಗದೀಶ,**
ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.

**ಶಿರಹಟ್ಟಿ ಪೊಲೀಸ್ ಠಾಣೆಗೆ ಸೇರುವ ಗ್ರಾಮಗಳು**

ಕೊಕ್ಕರಗುಂದಿ, ನಾಗರಮಡುವು, ಕೋಗನೂರ, ಬಿಜ್ಜೂರ, ಕೊಂಚಿಗೇರಿ, ಬೂದಿಹಾಳ, ಅಂಕಲಿ, ಗೋವನಕೊಪ್ಪ

**ಲಕ್ಷ್ಮೇಶ್ವರ ಪೊಲೀಸ್ ಠಾಣೆಗೆ ಸೇರುವ ಗ್ರಾಮಗಳು :**

ಯಳವತ್ತಿ, ಮಾಢಳ್ಳಿ, ಯತ್ತಿನಹಳ್ಳಿ, ನೆಲೋಗಲ್, ಶೆಟ್ಟಿಕೇರಿ, ಕುಂದ್ರಳ್ಳಿ, ಕುಂದ್ರಳ್ಳಿ ತಾಂಡಾ, ವಡ್ಡರಪಾಳ್ಯ, ನಾದಿಗಟ್ಟಿ

### ಗದಗ ರಡ್ಡಿ ಮಹಿಳಾ ಬಳಗದಿಂದ ಸಂಭ್ರಮದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಸಚಿವ ಎಚ್.ಕೆ. ಪಾಟೀಲ ಅಭಿಮತ

# ಮಹಿಳಾ ಸಮಾನತೆಗಾಗಿ ಕಾನೂನು ಮೀಸಲಾತಿ ಮಹತ್ವದ್ದು

■ ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲೇ ಬಸವಣ್ಣ ಹಾಗೂ ಇತರ ಶರಣರು ಮಹಿಳಾ ಸಮಾನತೆ ಮತ್ತು ಸಬಲೀಕರಣ ಕುರಿತು ಸಮಾಜದಲ್ಲಿ ವೈಚಾರಿಕತೆ ಮೂಡಿಸಿದ್ದರು. ನಂತರ ಕಾನೂನಿನ ಮೂಲಕ ಸಾಮಾಜಿಕ ನ್ಯಾಯ ಮತ್ತು ಮಹಿಳಾ ಮೀಸಲಾತಿ ಜಾರಿಗೊಂಡ ಪರಿಣಾಮ ಮಹಿಳೆಯರು ಇಂದು ಸಮಾಜದ ಮುಖ್ಯವಾಹಿನಿಗೆ ಬಂದಿದ್ದಾರೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಕಳಸಾಪೂರ ರಿಂಗ್‌ರೋಡ್‌ನ ಪ್ರೇಮ್

"12ನೇ ಶತಮಾನದಲ್ಲೇ ಬಸವಣ್ಣ ಹಾಗೂ ಶರಣರು ಮಹಿಳಾ ಸಮಾನತೆ ಮತ್ತು ಸಬಲೀಕರಣದ ಚಿಂತನೆಗೆ ಬುನಾದಿ ಹಾಕಿದ್ದರು. ನಂತರ ಕಾನೂನುಬದ್ಧ ಮೀಸಲಾತಿ ಜಾರಿಯಾದ ಪರಿಣಾಮ ಮಹಿಳೆಯರು ಇಂದು ರಾಜಕೀಯ ಹಾಗೂ ಆಡಳಿತ ಕ್ಷೇತ್ರಗಳಲ್ಲಿ ಪ್ರಮುಖ ಸ್ಥಾನ ಪಡೆದಿದ್ದಾರೆ."

**– ಸಚಿವ ಡಾ. ಎಚ್.ಕೆ. ಪಾಟೀಲ**




ಸ್ಪೋರ್ಟ್ಸ್ ಪಾರ್ಕ್‌ನಲ್ಲಿ ಗದಗ ರಡ್ಡಿ ಮಹಿಳಾ ಬಳಗ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಪುರುಷ ಪ್ರಧಾನ ಸಮಾಜದಲ್ಲಿ ಮಹಿಳೆಯರಿಗೆ ಸ್ವಾತಂತ್ರ್ಯ ದೊರಕದಿದ್ದ ಸಂದರ್ಭಗಳಲ್ಲಿ ಮಹಿಳಾ ಸಮಾನತೆ ಮತ್ತು ಹಕ್ಕುಗಳ ಬಗ್ಗೆ ಕೇವಲ ಭಾಷಣ ಹಾಗೂ ಸಾಹಿತ್ಯ ರಚನೆ ಮಾತ್ರ ನಡೆದಿದ್ದರೂ ನಿರೀಕ್ಷಿತ ಫಲಿತಾಂಶ ದೊರಕಲಿಲ್ಲ. ನಂತರ ಕಾನೂನಿನ ಮೂಲಕ ಮಹಿಳೆಯರಿಗೆ ರಾಜಕೀಯ ಮೀಸಲಾತಿ ನೀಡಿದ ಪರಿಣಾಮ ಇಂದು ಮಹಿಳೆಯರು ರಾಜಕೀಯ ಹಾಗೂ ಆಡಳಿತ ಕ್ಷೇತ್ರಗಳಲ್ಲಿ ಪ್ರಮುಖ ಸ್ಥಾನದಲ್ಲಿದ್ದಾರೆ ಎಂದು ಹೇಳಿದರು.

ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದ ಗ್ಯಾರಂಟಿ ಯೋಜನೆಗಳ ಮೂಲಕ ಮಹಿಳೆಯರಿಗೆ ಹಲವು ಸೌಲಭ್ಯಗಳನ್ನು ಒದಗಿಸಲಾಗಿದ್ದು, ಅವರ ಕಲ್ಯಾಣಕ್ಕಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿ ಮಹತ್ವದ ಬದಲಾವಣೆ ತಂದಿದೆ ಎಂದು ತಿಳಿಸಿದರು

ಗದಗದಲ್ಲಿ ರಡ್ಡಿ ಮಹಿಳಾ ಬಳಗ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಡಾ. ಎಚ್.ಕೆ. ಪಾಟೀಲ ಮಾತನಾಡಿ, ಬಸವಣ್ಣ ಕಾಲದಿಂದಲೇ ಮಹಿಳಾ ಸಮಾನತೆ ಚಿಂತನೆ ಆರಂಭವಾಗಿದ್ದು, ಕಾನೂನುಬದ್ಧ ಮೀಸಲಾತಿಯಿಂದ ಮಹಿಳೆಯರು ಇಂದು ರಾಜಕೀಯ ಮತ್ತು ಆಡಳಿತ ಕ್ಷೇತ್ರಗಳಲ್ಲಿ ಪ್ರಮುಖ ಸ್ಥಾನ ಪಡೆದಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಹಿಳಾ ಆರೋಗ್ಯ, ಶಿಕ್ಷಣ ಹಾಗೂ ಜಾಗೃತಿ ಕುರಿತು ತಜ್ಞರು ಸಲಹೆ ನೀಡಿದರು.

▶▶ 3ನೇ ಪುಟಕ್ಕೆ

### ಮತದಾರರ ಪಟ್ಟಿ 2002ರ ಪಟ್ಟಿಯೊಂದಿಗೆ ಮ್ಯಾಪಿಂಗ್ ಖಚಿತಪಡಿಸಿಕೊಳ್ಳಿ : ಆಯುಕ್ತರ ಮನವಿ

## ಶೀಘ್ರದಲ್ಲೇ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಕಾರ್ಯ ಆರಂಭ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ 72, 73 ಮತ್ತು 74 ವಿಧಾನಸಭಾ ಮತಕ್ಷೇತ್ರಗಳಿಗೆ ಸಂಬಂಧಿಸಿದಂತೆ ಭಾರತ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಶೀಘ್ರದಲ್ಲೇ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ 2026 (Special Intensive Revision – SIR) ಕಾರ್ಯ ಆರಂಭವಾಗಲಿದೆ ಎಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಪೂರ್ವ ತಯಾರಿಯಾಗಿ 2025ರಲ್ಲಿ 40 ವರ್ಷಕ್ಕಿಂತ ಮೇಲ್ಪಟ್ಟ ಮತದಾರರ ಹೆಸರನ್ನು 2002ರ ಮತದಾರರ ಪಟ್ಟಿಯೊಂದಿಗೆ ತಾಳೆ ಮಾಡಿ ಮ್ಯಾಪಿಂಗ್ ಮಾಡುವ ಕಾರ್ಯ ಕೈಗೊಳ್ಳಲಾಗಿದೆ. ಜೊತೆಗೆ ಮ್ಯಾಪಿಂಗ್ ಮಾಡಲಾದ ಮತದಾರರ ಕುಟುಂಬ ಸದಸ್ಯರೊಂದಿಗೆ ಪ್ರೊಜೆನಿ (ಜೋಡಣೆ) ಪ್ರಕ್ರಿಯೆಯನ್ನೂ ಪೂರ್ಣಗೊಳಿಸಲು ಚುನಾವಣಾ ಆಯೋಗ ಸೂಚನೆ ನೀಡಿದೆ ಎಂದು ಹೇಳಿದರು.

ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿ.ಎಲ್.ಓ) ಮನೆಮನೆ ಸಮೀಕ್ಷೆ ನಡೆಸಿ ಮ್ಯಾಪಿಂಗ್ ಕಾರ್ಯ ಮಾಡುತ್ತಿದ್ದರೂ ನಿರೀಕ್ಷಿತ ಮಟ್ಟದಲ್ಲಿ ಪ್ರಗತಿ ಸಾಧಿಸದಿರುವುದರಿಂದ



ಮತದಾರರು ಸಹಕಾರ ನೀಡಬೇಕು ಎಂದು ಆಯುಕ್ತರು ಮನವಿ ಮಾಡಿದ್ದಾರೆ.

ಮತದಾರರು ತಮ್ಮ ಹಾಗೂ ತಮ್ಮ ಕುಟುಂಬದವರ ಹೆಸರುಗಳು 2002ರ ಮತದಾರರ ಪಟ್ಟಿಯೊಂದಿಗೆ ಮ್ಯಾಪಿಂಗ್ ಆಗಿರುವುದನ್ನು ಬಿ.ಎಲ್.ಓರನ್ನು ಸಂಪರ್ಕಿಸಿ ಪರಿಶೀಲಿಸಿಕೊಳ್ಳಬೇಕು. ಮ್ಯಾಪಿಂಗ್ ಆಗದೇ ಇದ್ದರೆ 2002ರ ಪಟ್ಟಿಯಲ್ಲಿರುವ ವಿವರಗಳನ್ನು ನೀಡಿ ತಕ್ಷಣ ಮ್ಯಾಪಿಂಗ್ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

ಮ್ಯಾಪಿಂಗ್ ಆಗದೇ ಲಭ್ಯವಿಲ್ಲದಿರುವ ಮತದಾರರನ್ನು ಚುನಾವಣಾ ಆಯೋಗದ ನಿರ್ದೇಶನ ಹಾಗೂ ಮತದಾರರ ನೋಂದಣಿ ನಿಯಮಾವಳಿಗಳ ಪ್ರಕಾರ ಮತದಾರರ ಪಟ್ಟಿಯಿಂದ ಕೈಬಿಡುವ ಅಥವಾ ಸಮೀಕ್ಷೆಗೆ ಒಳಪಡಿಸುವ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ.

ಒಂದೇ ಕುಟುಂಬದ ಮತದಾರರು ಬೇರೆ ಬೇರೆ ಮತಗಟ್ಟೆಗಳಲ್ಲಿ ಅಥವಾ ತಪ್ಪಾದ ವಿವರಗಳೊಂದಿಗೆ ನೋಂದಾಯಿತರಾಗಿದ್ದರೆ ನಮೂನೆ-8 ಮೂಲಕ ತಿದ್ದುಪಡಿ ಅಥವಾ ವರ್ಗಾವಣೆ ಮಾಡಿಸಿಕೊಳ್ಳಬೇಕು. ಕುಟುಂಬದಲ್ಲಿ ಮೃತರಾದವರ ಹೆಸರುಗಳನ್ನು ತೆಗೆದುಹಾಕಲು ಮರಣ ಪ್ರಮಾಣಪತ್ರದೊಂದಿಗೆ ನಮೂನೆ-7 ಸಲ್ಲಿಸಬೇಕು ಎಂದು ಅವರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ತಮ್ಮ ಮತಗಟ್ಟೆ ಮಟ್ಟದ ಅಧಿಕಾರಿಗಳನ್ನು ಅಥವಾ ವಿಧಾನಸಭಾ ಕ್ಷೇತ್ರದ ಚುನಾವಣಾ ಕಾರ್ಯಾಲಯವನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

1. ಶೀಘ್ರದಲ್ಲೇ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ-2026
2. 40 ವರ್ಷ ಮೇಲ್ಪಟ್ಟ ಮತದಾರರ ಹೆಸರುಗಳನ್ನು 2002ರ ಪಟ್ಟಿಯೊಂದಿಗೆ ಮ್ಯಾಪಿಂಗ್
3. ಮ್ಯಾಪಿಂಗ್ ಆಗದಿದ್ದರೆ ಬಿ.ಎಲ್.ಓ ಮೂಲಕ ತಕ್ಷಣ ತಿದ್ದುಪಡಿ ಅಗತ್ಯ
4. ಮೃತರ ಹೆಸರು ತೆಗೆದುಹಾಕಲು ನಮೂನೆ-7, ತಿದ್ದುಪಡಿ/ವರ್ಗಾವಣೆಗೆ ನಮೂನೆ-8

### ತಂಬ್ರಹಳ್ಳಿ 66/11 ಕೆವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ರೂ. 2.96 ಕೋಟಿ ವೆಚ್ಚದ ನೂತನ 20 ಎಂ.ವಿ.ಎ ಪರಿವರ್ತಕಕ್ಕೆ ಶಾಸಕ ನೇಮಿರಾಜ್ ನಾಯ್ಕ ಚಾಲನೆ

## ಹತ್ತು ವರ್ಷ ರೈತರ ವಿದ್ಯುತ್ ಸಮಸ್ಯೆ ಬಗೆಹರಿಸದವರು ಈಗ ಫೋಟೋ ಹಾಕುವುದು ಹಾಸ್ಯಾಸ್ಪದ!

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕಳೆದ ಹತ್ತು ವರ್ಷಗಳ ಅವಧಿಯಲ್ಲಿ ತಂಬ್ರಹಳ್ಳಿ ಭಾಗದಲ್ಲಿ ಉಂಟಾಗಿದ್ದ ಲೋ ವೋಲ್ಟೇಜ್ ಸಮಸ್ಯೆಯನ್ನು ಬಗೆಹರಿಸಲು ಯಾವುದೇ ಕ್ರಮ ಕೈಗೊಳ್ಳದವರು ಈಗ ನಾವೇ ಟಿಸಿ ತಂದಿದ್ದೇವೆ ಎಂದು ಫೋಟೋಗಳನ್ನು ಹಾಕಿಕೊಳ್ಳುತ್ತಿರುವುದು ಹಾಸ್ಯಾಸ್ಪದ ಸಂಗತಿ ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ್ ಟೀಕಿಸಿದರು.

ತಾಲ್ಲೂಕಿನ ತಂಬ್ರಹಳ್ಳಿ ಗ್ರಾಮದ 66/11 ಕೆವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಸುಮಾರು □2.96 ಕೋಟಿ ವೆಚ್ಚದಲ್ಲಿ 12.5 ಎಂ.ವಿ.ಎ ಪರಿವರ್ತಕವನ್ನು 20 ಎಂ.ವಿ.ಎಗೆ ಮೇಲ್ದರ್ಜೆಗೆ ಏರಿಸಿ ಅಳವಡಿಸಿದ ನೂತನ ಪರಿವರ್ತಕಕ್ಕೆ ಭಾನುವಾರ ಚಾಲನೆ ನೀಡಿ ಅವರು ಮಾತನಾಡಿದರು.

ಈ ಹಿಂದೆ ವಡ್ಡಮ್ಮ ದೇವಿ ದೇವಸ್ಥಾನದಲ್ಲಿ ರೈತರು ನಡೆಸಿದ ಸಭೆಯಲ್ಲಿ ಬಂದ ಬೇಡಿಕೆಯ ಮೇರೆಗೆ ತಂಬ್ರಹಳ್ಳಿ ಪರಿವರ್ತಕವನ್ನು ಮೇಲ್ದರ್ಜೆಗೆ ಏರಿಸುವ ವಿಷಯವನ್ನು ಬೆಳಗಾವಿಯಲ್ಲಿ ನಡೆದ ವಿಧಾನಸಭಾ



ಅಧಿವೇಶನದಲ್ಲಿ ಪ್ರಸ್ತಾಪಿಸಿದ್ದೆವು. ಇಂಧನ ಸಚಿವ ಕೆ.ಜೆ. ಜಾರ್ಜ್ ಹಾಗೂ ಅಪರ ಕಾರ್ಯದರ್ಶಿ ಗೌರವ ಗುಪ್ತಾ ಅವರು ಮನವಿಗೆ ಸ್ಪಂದಿಸಿ ಕಳೆದ ವರ್ಷವೇ ಮಂಜೂರಾತಿ ನೀಡಿದ್ದರು. ಟೆಂಡರ್ ಪ್ರಕ್ರಿಯೆ ವಿಳಂಬವಾದ ಕಾರಣದಿಂದ ಕಾರ್ಯಾರಂಭಕ್ಕೆ ತಡವಾಯಿತು ಎಂದು ತಿಳಿಸಿದರು.

ಆದರೆ ಕೆಲವು ವಿರೋಧ ಪಕ್ಷದವರು ಈ ಪರಿವರ್ತಕವನ್ನು ತಾವೇ ತಂದಿದ್ದಾಗಿ ಹೇಳಿಕೊಂಡು ಫೋಟೋಗಳನ್ನು ಹಂಚಿಕೊಳ್ಳುತ್ತಿರುವುದು ಸರಿಯಲ್ಲ. ಕಳೆದ ಹತ್ತು ವರ್ಷಗಳಲ್ಲಿ ರೈತರ ಸಮಸ್ಯೆಗಳ ಬಗ್ಗೆ ಅವರು ಏನು ಮಾಡಿದ್ದಾರೆ ಎಂಬುದನ್ನು ಜನರಿಗೆ ತಿಳಿಸಬೇಕು ಎಂದು ಪ್ರಶ್ನಿಸಿದರು.

ಕೆಇಬಿ ಸ್ಟೇಷನ್ ಒಳಗೆ ಯಾರನ್ನಾದರೂ ಬಿಡುತ್ತಿರುವ ಅಧಿಕಾರಿಗಳ ವರ್ತನೆ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಅವರು, ವಿದ್ಯುತ್ ಸಮಸ್ಯೆಗಾಗಿ ರೈತರನ್ನು ಅಲೆದಾಡಿಸದೇ ಗೌರವದಿಂದ ಸೇವೆ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ಭಾಗದ ರೈತರಿಗೆ ಅನೇಕ ವರ್ಷಗಳಿಂದ ಕಾಡುತ್ತಿದ್ದ ವಿದ್ಯುತ್ ಸಮಸ್ಯೆಯನ್ನು ಹಂತ ಹಂತವಾಗಿ ಪರಿಹರಿಸಲಾಗುತ್ತಿದೆ. ವಿತರಣಾ ಕೇಂದ್ರದಲ್ಲಿ ಇನ್ನೊಂದು 12.5 ಎಂ.ವಿ.ಎ ಪರಿವರ್ತಕವನ್ನು ಶೀಘ್ರದಲ್ಲೇ ಅಳವಡಿಸಿ ರೈತರ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಜತೆಗೆ ಜಿ.ಕೋಡಿಹಳ್ಳಿ ಮತ್ತು ತೆಲುಗೋಳಿ ಗ್ರಾಮಗಳಲ್ಲಿ ಹೊಸ ಸಬ್‌ಸ್ಟೇಷನ್ ಆರಂಭಿಸಲು ಕೂಡ ಶೀಘ್ರದಲ್ಲೇ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

**"ಕ್ಷೇತ್ರಕ್ಕೆ ಅನ್ಯಾಯ ಮಾಡಿದ ಜನವಿರೋಧಿ ಬಜೆಟ್"**

ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ಜಿಲ್ಲೆ ಮತ್ತು ಕ್ಷೇತ್ರಕ್ಕೆ ಸೂಕ್ತ ಅನುದಾನ ನೀಡದೇ ನಿರ್ಲಕ್ಷ್ಯ ಮಾಡಲಾಗಿದೆ. 17 ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಕೇಂದ್ರ ಸರ್ಕಾರ ಶೇ.60ರಷ್ಟು ಹಣ ನೀಡಲು ಸಿದ್ಧವಿದ್ದರೂ ರಾಜ್ಯ ಸರ್ಕಾರ ಈ ವಿಷಯದಲ್ಲಿ ಕ್ರಮ ಕೈಗೊಳ್ಳದೆ ಕ್ಷೇತ್ರಕ್ಕೆ ಅನ್ಯಾಯ ಮಾಡಿದೆ. ಇದೊಂದು ಜನವಿರೋಧಿ ಬಜೆಟ್ ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ್ ಆರೋಪಿಸಿದರು.

ಈ ಸಂದರ್ಭದಲ್ಲಿ ತಂಬ್ರಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಬಣಕಾರ ಕೊಟ್ರೇಶ್ ಮಾತನಾಡಿ, ತೆಲುಗೋಳಿ ಹಾಗೂ ಜಿ.ಕೋಡಿಹಳ್ಳಿ ಗ್ರಾಮಗಳಲ್ಲಿ ಸಬ್‌ಸ್ಟೇಷನ್ ಆರಂಭಿಸುವುದು, ಟವರ್ ಲೈನ್ ಬದಲಾವಣೆ, ಚಿಲುಗೋಡು□ತಂಬ್ರಹಳ್ಳಿ ಪ್ರತ್ಯೇಕ ಫೀಡರ್, ಜೆಸ್ಕಾಂ ಕಚೇರಿ ಸ್ಥಾಪನೆ ಹಾಗೂ ಹೆಚ್ಚುವರಿ ಲೈನ್‌ಮನ್ ನೇಮಕ ಮಾಡುವಂತೆ ಶಾಸಕರಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಇಟಗಿ ಕೆಪಿಟಿಸಿಎಲ್ ಇಇ ರವೀಂದ್ರನಾಥ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ವೇಳೆ ಜೆಡಿಎಸ್ ಜಿಲ್ಲಾ ಅಧ್ಯಕ್ಷ ಮೃತ್ಯುಂಜಯ ಬಾದಾಮಿ, ಸತೀಶ್, ರವಿ ಪ್ರಸಾದ್, ಕೊಳ್ಳಿ ವೆಂಕಣ್ಣ, ದೊಡ್ಡಬಸಪ್ಪ, ವೀರನಗೌಡ, ಲಿಂಗ-ರೆಡ್ಡಿ, ಸಣ್ಣ ಕೊಟ್ರಪ್ಪ, ಬಣಕಾರ ಮಲ್ಲಿಕಾರ್ಜುನ, ಸೊಬಟಿ ಹರೀಶ್, ಆನೇಕಲ್ ಶಾಂತಪ್ಪ, ಸಿದ್ಧಾರಡ್ಡಿ, ಹರಟೆ ಕಾಳಪ್ಪ, ಹಲಗೇರಿ ಮಹೇಶ್, ಕೊಳ್ಳಿ ರಾಜಶೇಖರ ರೆಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಚಂದ್ರು ಪ್ರಾರ್ಥಿಸಿದರು. ತಿರುಕರೆಡ್ಡಿ ಹಾಗೂ ಕೊಟ್ರೇಶ್ ಕಾರ್ಯಕ್ರಮ ನಿರ್ವಹಿಸಿದರು.

### ಗದಗ ಡೈಟ್‌ನಿಂದ 'ಪ್ರಶಸ್ತ ಆ್ಯಪ್ 2.0' ಅನುಷ್ಠಾನ ಕುರಿತು ಕಾರ್ಯಾಗಾರದಲ್ಲಿ ನಡುವಿನಮನಿ ಅಭಿಪ್ರಾಯ

# ವಿಶೇಷ ಮಕ್ಕಳನ್ನು ಮುಖ್ಯವಾಹಿನಿಗೆ ತರಬೇಕು

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಶೇಷ ಚೇತನ ಮಕ್ಕಳಲ್ಲಿ ಸಕಾರಾತ್ಮಕ ಧೋರಣೆಯನ್ನು ಬೆಳೆಸುವಲ್ಲಿ ಹಾಗೂ ಪಾಲಕರನ್ನು ಆಶಾವಾದಿಗಳನ್ನಾಗಿ ಮಾಡುವುದರ ಜೊತೆಗೆ, ಪ್ರತಿ ಮಗು ವಿಶೇಷವಾಗಿದ್ದು ಪ್ರತಿಯೊಂದು ಮಗುವಿಗೂ ಅದರದೇ ಆದ ಶಕ್ತಿ ಮತ್ತು ಸಾಮರ್ಥ್ಯಗಳಿವೆ ಎಂಬುದನ್ನು ಮನವರಿಕೆ ಮಾಡಿಕೊಡಬೇಕು. ವಿಶೇಷ ಮಕ್ಕಳನ್ನು ಮುಖ್ಯವಾಹಿನಿಗೆ ತರುವಲ್ಲಿ ಎಲ್ಲರೂ ಒಟ್ಟಾಗಿ ಶ್ರಮಿಸಬೇಕಾಗಿದೆ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಸೋಮವಾರ ಗದುಗಿನ ಬ್ರೈಟ್ ಹಾರಿಜನ್ ಶಾಲೆಯಲ್ಲಿ ಗದಗ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಿಂದ 'ಪ್ರಶಸ್ತ ಆ್ಯಪ್ 2.0' ಅನುಷ್ಠಾನ ಕುರಿತು ಗದಗ ಶಹರ ಹಾಗೂ ಗದಗ ಗ್ರಾಮೀಣ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರಿಗಾಗಿ ಆಯೋಜಿಸಿದ್ದ ಒಂದು ದಿನದ ಕಾರ್ಯಾಗಾರವನ್ನು ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ವಿಶೇಷ ಮಕ್ಕಳಿಗಾಗಿ ಸರ್ಕಾರದಿಂದ ಒದಗಿಸಲಾಗಿರುವ ಸೌಲಭ್ಯಗಳನ್ನು ಮಕ್ಕಳಿಗೆ ತಲುಪಿಸುವ ಮೂಲಕ ಅವರು ಶೈಕ್ಷಣಿಕ, ವೈಯಕ್ತಿಕ ಹಾಗೂ ಸಾಮಾಜಿಕ ಬದುಕಿನಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಈ ದಿಸೆಯಲ್ಲಿ 'ಪ್ರಶಸ್ತ ಆ್ಯಪ್' ಮಹತ್ವದ ಪಾತ್ರ ವಹಿಸಲಿದೆ ಎಂದು ಹೇಳಿದರು.

ಗದಗ ಗ್ರಾಮೀಣ ಕ್ಷೇತ್ರ ಸಮನ್ವಯಾಧಿಕಾರಿ ಜೆ.ಎ. ಬಾವಿಕಟ್ಟಿ ಮಾತನಾಡಿ, ವಿಶೇಷ ಮಕ್ಕಳ ಶಿಕ್ಷಣದಲ್ಲಿ ಸಮುದಾಯದ ಪಾತ್ರ ಅತ್ಯಂತ ಮಹತ್ವದ್ದು. ಶಿಕ್ಷಕರು, ಪಾಲಕರು ಮತ್ತು ಸಮುದಾಯ ಕೈಜೋಡಿಸಿ ಈ ಮಕ್ಕಳ ಅಭಿವೃದ್ಧಿಗೆ ಸಂಬಂಧಿಸಿದ ಯೋಜನೆಗಳನ್ನು ತಿಳಿದು ಅವುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬ್ರೈಟ್ ಹಾರಿಜನ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎಚ್.ಎಚ್. ಗದಗ ಮಾತನಾಡಿ, ಬದಲಾಗುತ್ತಿರುವ ಕಾಲಘಟ್ಟದಲ್ಲಿ ತಾಂತ್ರಿಕತೆಯ ಬಳಕೆ ಅತ್ಯಂತ ಅಗತ್ಯವಾಗಿದೆ. ಬೋಧನಾ ಕೌಶಲ್ಯಗಳಲ್ಲಿ ಹೊಸ ನಾವೀನ್ಯತೆಗಳನ್ನು ಅಳವಡಿಸಿಕೊಂಡು ಶಿಕ್ಷಕರು ವಿಶೇಷ ಚೇತನ ಮಕ್ಕಳಿಗೆ ಇನ್ನಷ್ಟು ಸಹಕಾರಿಯಾಗಬೇಕು ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿ ಜಿ.ಡಿ. ಮುಳಗುಂದ ಅವರು 'ಪ್ರಶಸ್ತ ಆ್ಯಪ್ 2.0' ಕುರಿತು ವಿವರವಾದ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಎಸ್.ಎನ್. ಸ್ಥಾವರಮಠ ಪ್ರಾರ್ಥಿಸಿದರು. ಮುಖ್ಯೋಪಾಧ್ಯಾಯ ಎಸ್.ಬಿ. ದೊಡ್ಡಣ್ಣವರ ಸ್ವಾಗತಿಸಿದರು. ಎಂ.ಐ. ಮುಗಳಿ ನಿರೂಪಿಸಿದರು. ಎಚ್.ಎಸ್. ಮಂಗಳೂರು ವಂದಿಸಿದರು.

ಈ ಸಂದರ್ಭದಲ್ಲಿ ಸಂಪನ್ಮೂಲ ಶಿಕ್ಷಕರಾದ ಶ್ರೀಮತಿ ಕೆ.ಎಸ್. ಬೇಲೇರಿ, ಶ್ರೀಮತಿ ಈ.ಡಿ. ಹುಗ್ಗೇನವರ, ಎಸ್.ವಿ. ಚಳಗೇರಿ ಸೇರಿದಂತೆ ಗದಗ ಶಹರ ಹಾಗೂ ಗದಗ ಗ್ರಾಮೀಣ ವಲಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಎಲ್ಲಾ ಮುಖ್ಯ ಶಿಕ್ಷಕರು ಭಾಗವಹಿಸಿದ್ದರು.



"ಪ್ರತಿ ಮಗು ವಿಶೇಷವಾಗಿದ್ದು, ಅದರದೇ ಆದ ಶಕ್ತಿ ಮತ್ತು ಸಾಮರ್ಥ್ಯಗಳನ್ನು ಹೊಂದಿದೆ. ವಿಶೇಷ ಚೇತನ ಮಕ್ಕಳನ್ನು ಗುರುತಿಸಿ ಅವರಿಗೆ ಸೂಕ್ತ ಅವಕಾಶಗಳನ್ನು ನೀಡಿದರೆ ಅವರು ಸಮಾಜದ ಮುಖ್ಯವಾಹಿನಿಯಲ್ಲಿ ಮುನ್ನಡೆಯಲು ಸಾಧ್ಯ."
– **ವಿ.ವಿ. ನಡುವಿನಮನಿ,** ಕ್ಷೇತ್ರ ಶಿಕ್ಷಣಾಧಿಕಾರಿ, ಗದಗ ಗ್ರಾಮೀಣ.

"ಜ್ಞಾನ ಆಧಾರಿತ ಜಾಗತಿಕ ಸಮಾಜ ಎದುರಿಸುತ್ತಿರುವ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಶಿಕ್ಷಣ ವ್ಯವಸ್ಥೆಯಲ್ಲಿ ಹಲವು ಬದಲಾವಣೆಗಳು ಅಗತ್ಯವಾಗಿವೆ. ನ್ಯೂನ್ಯತೆ ಹೊಂದಿರುವ ಮಕ್ಕಳು ರಾಷ್ಟ್ರದ ಉಪಯುಕ್ತ ನಾಗರಿಕರಾಗಲು ಅವರಿಗೆ ಸಮಾನ ಅವಕಾಶಗಳು ಮತ್ತು ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಹಲವು ಕ್ರಮಗಳು ಕೈಗೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ 'ಪ್ರಶಸ್ತ ಆ್ಯಪ್ 2.0' ಇನ್ನಷ್ಟು ಸಹಕಾರಿ ಆಗಲಿದೆ."
– **ಬಿ.ಎಫ್. ಅರವಟಗಿ,** ಹಿರಿಯ ಉಪನ್ಯಾಸಕರು ಹಾಗೂ ತರಬೇತಿ ನೋಡಲ್ ಅಧಿಕಾರಿ, ಗದಗ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ.

# ಪ್ರೊ. ಕೆರೂರ ಕರ್ನಾಟಕ ವಿಶ್ವವಿದ್ಯಾಲಯ ರಾಜ್ಯಶಾಸ್ತ್ರ ಅಧ್ಯಾಪಕರ ಸಂಘದ ಅಧ್ಯಕ್ಷರಾಗಿ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರ ಪುರಸಭೆ ಎಂಎ ಕಾಲೇಜಿನ ಪ್ರೊ. ಎಚ್.ಎನ್. ಕೆರೂರ ಅವರನ್ನು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ಅಧ್ಯಾಪಕರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ.

ಈ ಸಾಧನೆಗೆ ಸನ್ಮಾನವಾಗಿ, ಲಕ್ಷ್ಮೇಶ್ವರದ ಬಾಳೇಶ್ವರ ದೇವಸ್ಥಾನದಲ್ಲಿ ಗುರುವಾರ, ಪುರಸಭೆ ಉಮಾ ವಿದ್ಯಾಲಯದ ಎಸ್‌ಎಸ್‌ಎಲ್‌ಸಿ ಓದಿದ ಮೈತ್ರಿ–1985 ಬಳಗ ಸದಸ್ಯರು ಪ್ರೊ. ಕೆರೂರ ಅವರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಬಳಗದ ಎಲ್ಲ ಸದಸ್ಯರೂ ಉಪಸ್ಥಿತರಿದ್ದರು.

# ಮಹಿಳೆಯರಿಗೆ ಪೂಜ್ಯನೀಯ ಭಾವನೆಯಿಂದ ಗೌರವ ನೀಡುವ ಪರಂಪರೆ ಬೆಳೆಯುತ್ತಲೇ ಬಂದಿದೆ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**


ಸನಾತನ ಸಂಸ್ಕೃತಿ ಪರಂಪರೆಯಲ್ಲಿ ಭಾರತದಲ್ಲಿ ಮಹಿಳೆಯರಿಗೆ ಪೂಜ್ಯನೀಯ ಸ್ಥಾನ ನೀಡಿರುವುದಾಗಿ ಗದಗ ಜಿಲ್ಲಾ ಕದಳಿ ವೇದಿಕೆ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ತಿಳಿಸಿದ್ದಾರೆ.

ಅವರು ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಸಭಾ ಭವನದಲ್ಲಿ ಶರಣ ಸಾಹಿತ್ಯ ಪರಿಷತ್ತು ಮತ್ತು ಕದಳಿ ವೇದಿಕೆ ಏರ್ಪಡಿಸಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, "ಮಹಿಳೆಯರು ಇಂದು ಪುರುಷರಷ್ಟೇ ಪ್ರಭಲರಾಗಿದ್ದಾರೆ. ಪುರುಷನಿಗೆ ಸಮಾನವಾದ ಕಾರ್ಯ ನಿರ್ವಹಿಸುವ ಸಾಮರ್ಥ್ಯವಿದೆ. ಸರ್ವರಂಗದಲ್ಲೂ ಮೇಲುಗೈ ಸಾಧಿಸಿದ್ದಾರೆ. ಮಹಿಳೆ ಅಬಲೆ ಅಲ್ಲ; ಸಮರ್ಥ ಸಬಲೆ. ಹೆಣ್ಣು–ಗಂಡು ಒಂದು ನಾಣ್ಯದ ಎರಡು ಮುಖಗಳು. ಇಬ್ಬರಿಗೂ ಸಮಾನ. ಪ್ರತಿ ಕುಟುಂಬದ ಕಣ್ಣು ಹೆಣ್ಣು, ಹೆಣ್ಣು ಮಗು ಹುಟ್ಟುವುದು ಪೂರ್ವಜರ ಪುಣ್ಯದ ಫಲ. ಮಹಿಳೆಯನ್ನು ಪೂಜ್ಯನೀಯ ಸ್ಥಾನದಿಂದ ನೋಡಿದಾಗ ಎಲ್ಲಾ ಕಾರ್ಯಗಳು ಸುಗಮವಾಗಿ ಸಾಗುತ್ತವೆ. ನೈತಿಕ ಮೌಲ್ಯ, ಸಂಸ್ಕಾರ, ಸಂಸ್ಕೃತಿ ಬೆಳಗುತ್ತವೆ. ಸಮಾಜದಲ್ಲಿನ ಮೂಡ ನಂಬಿಕೆಗಳನ್ನು ತೆಗೆದುಹಾಕಿ ಸುಂದರ ಬದುಕು ನಿರ್ಮಿಸಲು ಹೆಣ್ಣು–ಗಂಡು ಎಂಭ ಬೇಧ ಭಾವ ತೋರಸದೇ ಉತ್ತಮ ಶಿಕ್ಷಣ ನೀಡಬೇಕು," ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಮೇಲ್ವಿಚಾರಕಿ ಶಾಂತಾ ಮಾತನಾಡಿ, "ಹೆಣ್ಣು ಮಕ್ಕಳನ್ನು ಗೌರವದಿಂದ ನೋಡಿದಾಗ ಸುಂದರ ಸಮಾಜ ಕಟ್ಟುವುದು ಸಾಧ್ಯ." ಎಂದು ತಿಳಿಸಿದರು.

ಕದಳಿ ವೇದಿಕೆ ಅಧ್ಯಕ್ಷೆ ರಾಜೇಶ್ವರಿ ಬಡ್ನಿ ಮಾತನಾಡಿ, "12ನೇ ಶತಮಾನದಲ್ಲೇ ಬಸವಣ್ಣನವರು ಅನುಭವ ಮಂಟಪ ನಿರ್ಮಾಣ ಮಾಡುವ ಮೂಲಕ ಮಹಿಳೆಯರಿಗೆ ಸಮಾನ ಹಕ್ಕು, ಕರ್ತವ್ಯಗಳನ್ನು ನೀಡಿ ಗೌರವ ನೀಡಿದ್ದಾರೆ. ಅವರ ಹಾದಿಯಲ್ಲಿ ನಾವು ನಿಂತು ಮಹಿಳೆಯರನ್ನು ಪೂಜ್ಯನೀಯ ಭಾವದಿಂದ ಗೌರವಿಸಬೇಕು" ಎಂದರು.

ಕಾರ್ಯಕ್ರಮದಲ್ಲಿ ರಾಜೇಶ್ವರಿ ಬಡ್ನಿ, ಸುಧಾ ಹುಚ್ಚಣ್ಣವರ, ಸುಮನ್ ಚವಡಿ, ಪ್ರೇಮಾ ಬಡ್ನಿ, ಶಾಂತಾ, ಕವಿತಾ ಬಿನ್ನಾಳ, ಶಿವಾನಂದ ಆಪ್ತಗೇರಿ, ಮಹೇಶ ಶಿರಹಟ್ಟಿ, ಈರಣ್ಣಾ ದೊಟಿಕಲ್, ಮುತ್ತಪ್ಪ ಹುಡೆದ, ವಿ.ಡಿ. ಸಿದ್ದನಗೌಡ ಮತ್ತಿತರರು ಉಪಸ್ಥಿತರಿದ್ದರು.



ಕಾರ್ಯಕ್ರಮದ ಅಂಗವಾಗಿ ಹಳೆ ಆಹಾರ ಪದಾರ್ಥಗಳ ಸಂಗಟಿ ಸಾರು, ಪುಂಡಿ ಪಲ್ಯ, ಮುದ್ದಿ, ಮಜ್ಜಿಗೆ ಆಂಬ್ರ, ಸುಳ್ಳಿ ಹೋಳಿಗೆ, ಕಿಚಡಿ, ರಾಗಿ ಸಂಗಟಿ, ನವಣೆ ಅನ್ನಾ, ಕುಸುಬಿ ಅನ್ನ, ರಾಗಿ ಅಂಬ್ಲಿ, ತತ್ರಾಣಿಯಲ್ಲಿನ ನೀರು ಮುಂತಾದ ಹತ್ತಾರು ಸಾಂಪ್ರದಾಯಿಕ ಪದಾರ್ಥಗಳ ಸವಿಯ ಸ್ಪರ್ಧೆ ನಡೆಯಿತು.

# ತತ್ವಪದಗಳು ಜೀವನ ಮಾರ್ಗದರ್ಶಕ ಸಂದೇಶಗಳು

**■ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ತತ್ವಪದಗಳು ಕೇವಲ ಹಾಡುಗಳಲ್ಲ, ಅವು ಬದುಕಿನ ದರ್ಶನಗಳಾಗಿದ್ದು, ಕಡಕೋಳ ಮಡಿವಾಳಪ್ಪ, ಶಿಶುನಾಳ ಶರೀಫ ಮುಂತಾದ ಸಂತರ ತತ್ವಪದಗಳು ಜಾತಿ–ಧರ್ಮ ಭೇದವಿಲ್ಲದೆ ಮನುಕುಲದ ಏಕತೆಯನ್ನು ಸಾರುತ್ತವೆ ಎಂದು ಧಾರವಾಡದ ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯದ ಕನ್ನಡ ಉಪನ್ಯಾಸಕ ಡಾ. ಧನಂಜಯಕುಮಾರ ಸುಳೇಕಲ್ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಂತರಿಕ ಗುಣಮಟ್ಟ ಭರವಸೆ ಕೋಶ ಹಾಗೂ ಕನ್ನಡ ವಿಭಾಗದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ 'ಕನ್ನಡ ಸಾಹಿತ್ಯದಲ್ಲಿ ತತ್ವಪದ ಪರಂಪರೆ' ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಖ್ಯ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದರು.

18ನೇ ಶತಮಾನವನ್ನು ಸಾಹಿತ್ಯ ಚರಿತ್ರೆಕಾರರು ಬರಡುಕಾಲ ಎಂದು ಕರೆಯುವುದು ಸರಿಯಲ್ಲ. ಈ ಅವಧಿಯಲ್ಲಿ 400ಕ್ಕೂ ಹೆಚ್ಚು ತತ್ವಪದಕಾರರು ಪದಗಳನ್ನು ರಚಿಸಿದ್ದು, ಈ ಯುಗವನ್ನು ತತ್ವಪದಕಾರರ ಸುವರ್ಣಯುಗವೆಂದು ಪರಿಗಣಿಸಬೇಕಾಗಿದೆ ಎಂದು ಹೇಳಿದರು.

ಕನ್ನಡ ವಿಭಾಗದ ಮುಖ್ಯಸ್ಥ ಹಾಗೂ ಸಾಂಸ್ಕೃತಿಕ ಘಟಕದ ಸಂಯೋಜಕ ರಮೇಶ ಹುಲಕುಂದ ಪ್ರಾಸ್ತಾವಿಕವಾಗಿ ಮಾತನಾಡಿ, ತತ್ವಪದಗಳು ಬದುಕಿನ ಕನ್ನಡಿಗಳಂತಿದ್ದು ಮನುಷ್ಯನ ಅರಿವನ್ನು ಜಾಗೃತಗೊಳಿಸುವ ಶಕ್ತಿ ಹೊಂದಿವೆ. ಸರಳ ಭಾಷೆಯಲ್ಲಿ ಗಹನವಾದ ಸತ್ಯಗಳನ್ನು ಸಾರುವ ಈ ಪರಂಪರೆ ಕನ್ನಡ ಸಾಹಿತ್ಯದಲ್ಲಿ ಮಹತ್ವದ ಸ್ಥಾನ ಪಡೆದಿದೆ ಎಂದರು.

ಐಕ್ಯುಎಸಿ ಸಹಸಂಯೋಜಕ ಡಾ. ಮಂಜುನಾಥ ತ್ಯಾಲಗಡಿ, ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ಅಪ್ಪಣ್ಣ ಹಂಜೆ ಅವರು ತತ್ವಪದಗಳು ಸಮಾಜ ಸುಧಾರಣೆಗೆ ದಾರಿ ತೋರಿದ್ದು, ಮಾನವೀಯ ಮೌಲ್ಯಗಳ ಅರಿವು ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯೆ ಡಾ. ಸುಧಾ ಕೌಜಗೇರಿ ಮಾತನಾಡಿ, ಜನಸಾಮಾನ್ಯರ ಆಡುಭಾಷೆಯಲ್ಲಿ ಗಹನ ವಿಚಾರಗಳನ್ನು ಮನಮುಟ್ಟುವಂತೆ ಹೇಳುವ ಶಕ್ತಿ ತತ್ವಪದಗಳಿಗೆ ಇದೆ. ವಿದ್ಯಾರ್ಥಿಗಳು ಇಂತಹ ಸಾಹಿತ್ಯವನ್ನು ಅಧ್ಯಯನ ಮಾಡುವುದರಿಂದ ನೈತಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಸಾಧ್ಯ ಎಂದು ಹೇಳಿದರು.

ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಭೀಮೇಶ ಅತಿಥಿಗಳನ್ನು ಸ್ವಾಗತಿಸಿ ಪರಿಚಯಿಸಿದರು. ಡಾ. ಸಾರಿಕಾ ಪಾಟೀಲ, ಸಾವಿತ್ರಿ ಟಿ. ಅವರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ಡಾ. ಬಸವರಾಜ ಗಟ್ಟೆಣ್ಣವರ ವಂದನಾರ್ಪಣೆಗೈದರು. ಕಲ್ಯಾಣಿ ಕೊಚ್ಚತ್ ಕಾರ್ಯಕ್ರಮ ನಿರೂಪಿಸಿದರು. ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.




ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಡಾ. ಧನಂಜಯಕುಮಾರ ಸುಳೇಕಲ್ ಹೇಳಿದರು, ತತ್ವಪದಗಳು ಜಾತಿ–ಧರ್ಮ ಭೇದವಿಲ್ಲದೆ ಮನುಷ್ಯನ ಜೀವನದಲ್ಲಿ ನೈತಿಕ, ಸಾಮಾಜಿಕ, ಆಧ್ಯಾತ್ಮಿಕ ಮೌಲ್ಯಗಳನ್ನು ಬೆಳೆಸುತ್ತವೆ ಮತ್ತು ಸಮಾಜದಲ್ಲಿ ಸಹನೆ, ಸೌಹಾರ್ದತೆ ಮತ್ತು ನೈತಿಕ ಬದುಕು ಉಳಿಸಲು ಮಾರ್ಗದರ್ಶನ ನೀಡುತ್ತವೆ.

# ಮೂಲಸೌಲಭ್ಯ ಸಮಸ್ಯೆಗಳಿಗೆ ತಕ್ಷಣ ಪರಿಹಾರ ನೀಡಲು ಜನಪ್ರತಿನಿಧಿಗಳು ಗಮನ ಹರಿಸಬೇಕು: ಪೂರ್ಣಾಜಿ ಖರಾಟೆ


**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರ ಪಟ್ಟಣವು ಹತ್ತಾರು ವರ್ಷಗಳಿಂದ ಮೂಲಸೌಲಭ್ಯ ಸಮಸ್ಯೆಗಳಿಂದ ಬಳಲುತ್ತಿದ್ದು, ಈ ಸಮಸ್ಯೆಗಳಿಗೆ ತಕ್ಷಣ ಪರಿಹಾರ ನೀಡಲು ಜನಪ್ರತಿನಿಧಿಗಳು ಮತ್ತು ಉಸ್ತುವಾರಿ ಸಚಿವರು ಗಮನ ಹರಿಸಬೇಕು ಎಂದು ನಿವೃತ್ತ ಶಿಕ್ಷಕ ಮತ್ತು ಬಿಜೆಪಿ ಎಸ್‌ಸಿ ಮೋರ್ಚಾದ ಮಾಜಿ ಜಿಲ್ಲಾ ಉಪಾಧ್ಯಕ್ಷ ಪೂರ್ಣಾಜಿ ಖರಾಟೆ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹತ್ತು ವರ್ಷಗಳ ಹಿಂದೆ ಒಳಚರಂಡಿ ಯೋಜನೆಗಾಗಿ ರಸ್ತೆಗಳನ್ನು ಅಗೆದು ಪೈಪ್‌ಲೈನ್ ಜೋಡಿಸಲು ಲಕ್ಷಾಂತರ ರೂ. ವೆಚ್ಚ ಮಾಡಲಾಯಿತು, ಆದರೆ ಅವು ಸರಿಯಾಗಿ ದುರಸ್ತಿ ಮಾಡದ ಕಾರಣ ಪಟ್ಟಣದ ಬಹುತೇಕ ರಸ್ತೆಗಳು ಬಳಕೆಗೆ ಅಸಮರ್ಥವಾಗಿವೆ.

ಕುಡಿಯುವ ನೀರಿನ ಸಮಸ್ಯೆ ನಿರ್ವಹಣೆ ಕೊರತೆಯಿಂದ ತೀವ್ರವಾಗಿದೆ ಮತ್ತು ಮುಂದಿನ ದಿನಗಳಲ್ಲಿ ಜನರಿಗೆ ಕಷ್ಟ ಹೆಚ್ಚಬಹುದು ಎಂದು ಅವರು ಹೇಳಿದರು.

ಪೂರ್ಣಾಜಿ ಖರಾಟೆ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೆ ಮನವಿ ಮಾಡಿ, ಲಕ್ಷ್ಮೇಶ್ವರ ತಾಲ್ಲೂಕಿನ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ನೀಡುವಂತೆ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಶಿಗ್ಲಿ ಗ್ರಾಮದ ಸಾಮಾಜಿಕ ಹೋರಾಟಗಾರ ಸೋಮಣ್ಣ ಡಾಣಗಲ್ಲ ಸಹ ಹಾಜರಾಗಿದ್ದರು.



"ಲಕ್ಷ್ಮೇಶ್ವರ ಹೊಸ ತಾಲ್ಲೂಕು ಕೇಂದ್ರವಾಗಿದ್ದು ಎಂಟು ವರ್ಷ ಕಳೆದರೂ ಹಲವಾರು ಕಚೇರಿಗಳು ಆರಂಭವಾಗಿಲ್ಲ. ಗದಗ–ಯಲವಗಿ ರೈಲ್ವೆ ಮಾರ್ಗ ಮತ್ತು ಇಳಕಲ್ಲ–ಕೈಗಾ ರಸ್ತೆ ನಿರ್ಮಾಣವೂ ವಿಳಂಬಗೊಂಡಿದ್ದು, ತಾಲ್ಲೂಕಿನ ಅಭಿವೃದ್ಧಿ ಹಿಂದುಳಿದಿದೆ" ಎಂದು ಆರೋಪಿಸಿದರು.

ಹತ್ತಿರದ ಪುರಾತನ ಇಟ್ಟಗೇರಿ ಕೆರೆಯು ನಾಲ್ಕು ದಿಕ್ಕಿನಿಂದ ಒತ್ತಡಕ್ಕೆ ಒಳಗಾಗಿದ್ದು, ಲಕ್ಷಾಂತರ ವೆಚ್ಚದಲ್ಲಿ ನಿರ್ಮಿಸಿರುವ ಮಣ್ಣಿನ ಒಡ್ಡು ಪುರಸಭೆಯವರು ನಿರಂತರವಾಗಿ ತೆರವುಗೊಳಿಸುತ್ತಿದ್ದಾರೆ. ಜನರ ತೆರಿಗೆ ಹಣವನ್ನು ಈ ರೀತಿಯಲ್ಲಿ ವ್ಯರ್ಥ ಮಾಡುವುದು ತಪ್ಪು.
– **ಪೂರ್ಣಾಜಿ ಖರಾಟೆ,** ಬಿಜೆಪಿ ಮುಖಂಡ.

# ದಲಿತ ವಿರೋಧಿ ಬಜೆಟ್: ಬಸವರಾಜ ಮುಳ್ಳಾಳ ಆರೋಪ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ರಾಜ್ಯ ಕಾಂಗ್ರೆಸ್ ಸರಕಾರದ ಹಣಕಾಸು ಸಚಿವ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ ಪ್ರಸಕ್ತ ಸಾಲಿನ ಬಜೆಟ್ ದಲಿತ ವಿರೋಧಿಯಾಗಿದೆ ಎಂದು ಲಕ್ಕುಂಡಿ ಬಿ.ಜೆ.ಪಿ ಮಂಡಲದ ಎಸ್.ಸಿ. ಮೋರ್ಚಾ ಮಾಜಿ ಅಧ್ಯಕ್ಷ ಬಸವರಾಜ ಮುಳ್ಳಾಳ ಆರೋಪಿಸಿದ್ದಾರೆ.



"ಬಜೆಟ್‌ನಲ್ಲಿ ದಲಿತರ ಅಭಿವೃದ್ಧಿಗೆ ಯಾವುದೇ ಪೂರಕ ಯೋಜನೆಗಳನ್ನು ಕಲ್ಪಿಸಲಾಗಿಲ್ಲ. ಆರ್ಥಿಕವಾಗಿ ಹಿಂದುಳಿದ ದಲಿತರಿಗೆ ವರದಾನವಾಗಬೇಕಿದ್ದ ಬಜೆಟ್ ಹಳೆಯ ವ್ಯವಸ್ಥೆಯನ್ನು ಮುಂದುವರಿಸಿಕೊಂಡು, ಮತ್ತೆ ದಲಿತ ವಿರೋಧಿ ನೀತಿಯನ್ನೇ ಪ್ರದರ್ಶನಗೊಳಿಸಿದೆ. ಮುಂದಿನ ಜಿ.ಪಂ. ಹಾಗೂ ತಾ.ಪಂ. ಚುನಾವಣೆಯನ್ನು ಗುರಿಯಾಗಿಸಿಕೊಂಡು, ಕೇವಲ ಒಂದು ಕೋಮಿನ ಮತದಾರರನ್ನು ಓಲೈಕೆ ಮಾಡುವ ಪ್ರಯತ್ನವಾಗಿದೆ. ಇದು ನಾಡಿನ ಜನತೆಗೆ ಮೋಸವಾಗಿದ್ದು, ನಿರಾಶಾದಾಯಕ ಬಜೆಟ್ ಎಂದು ದಲಿತ ವಿರೋಧಿ ಬಜೆಟ್: ಬಸವರಾಜ ಮುಳ್ಳಾಳರ ಗಂಭೀರ ಆರೋಪ

ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ: ರಾಜ್ಯ ಕಾಂಗ್ರೆಸ್ ಸರಕಾರದ ಹಣಕಾಸು ಸಚಿವ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ ಪ್ರಸಕ್ತ ಸಾಲಿನ ಬಜೆಟ್ ದಲಿತ ವಿರೋಧಿಯಾಗಿದೆ ಎಂದು ಲಕ್ಕುಂಡಿ ಬಿ.ಜೆ.ಪಿ ಮಂಡಲದ ಎಸ್.ಸಿ. ಮೋರ್ಚಾ ಮಾಜಿ ಅಧ್ಯಕ್ಷ ಬಸವರಾಜ ಮುಳ್ಳಾಳ ಆರೋಪಿಸಿದ್ದಾರೆ.

ಬಸವರಾಜ ಮುಳ್ಳಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ, "ಬಜೆಟ್‌ನಲ್ಲಿ ದಲಿತರ ಅಭಿವೃದ್ಧಿಗೆ ಯಾವುದೇ ಪೂರಕ ಯೋಜನೆಗಳನ್ನು ಕಲ್ಪಿಸಲಾಗಿಲ್ಲ. ಆರ್ಥಿಕವಾಗಿ ಹಿಂದುಳಿದ ದಲಿತರಿಗೆ ವರದಾನವಾಗಬೇಕಿದ್ದ ಬಜೆಟ್ ಹಳೆಯ ವ್ಯವಸ್ಥೆಯನ್ನು ಮುಂದುವರಿಸಿಕೊಂಡು, ಮತ್ತೆ ದಲಿತ ವಿರೋಧಿ ನೀತಿಯನ್ನೇ ಪ್ರದರ್ಶನಗೊಳಿಸಿದೆ. ಮುಂದಿನ ಜಿ.ಪಂ. ಹಾಗೂ ತಾ.ಪಂ. ಚುನಾವಣೆಯನ್ನು ಗುರಿಯಾಗಿಸಿಕೊಂಡು, ಕೇವಲ ಒಂದು ಕೋಮಿನ ಮತದಾರರನ್ನು ಓಲೈಕೆ ಮಾಡುವ ಪ್ರಯತ್ನವಾಗಿದೆ. ಇದು ನಾಡಿನ ಜನತೆಗೆ ಮೋಸವಾಗಿದ್ದು, ನಿರಾಶಾದಾಯಕ ಬಜೆಟ್ ಎಂದು ಮುಳ್ಳಾಳ ಆರೋಪಿಸಿದ್ದಾರೆ.

# ಎಪಿಎಂಸಿ ಮಳಿಗೆಗಳಿಗೆ ನೂತನ ದರ ನಿಗದಿ ಮಾಡಲು ಆಗ್ರಹ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಬಸ್ ನಿಲ್ದಾಣದ ಸುತ್ತಮುತ್ತ ಇರುವ ಎಪಿಎಂಸಿ ಮಳಿಗೆಗಳು ಉಪಯೋಗವಾಗದೆ ಖಾಲಿ ಇರುವುದರಿಂದ, ಅವುಗಳಿಗೆ ತಕ್ಷಣವೇ ನೂತನ ದರ ನಿಗದಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕೆಂದು ಆಗ್ರಹಿಸಿ ಸೋಮವಾರ ಸ್ಥಳೀಯ ಕುಂದುಕೊರತೆ ನಿವಾರಣಾ ಸಮಿತಿ ವತಿಯಿಂದ ತಹಶೀಲ್ದಾರರ ಮೂಲಕ ಸಚಿವ ಶಿವಾನಂದ ಪಾಟೀಲ ಅವರಿಗೆ ಮನವಿ ಸಲ್ಲಿಸಲಾಯಿತು.

ಸಮಿತಿಯ ಅಧ್ಯಕ್ಷ ಅಕ್ಬರ್‌ಸಾಬ ಯಾದಗಿರಿ, ನಾಗರಾಜ ಲಕ್ಕುಂಡಿ, ಶ್ರೀನಿವಾಸ ಬಾರಬಾರ, ಅಪ್ಪಣ್ಣ ಕುಬೇರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



**ಗದಗದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ : ಗ್ಯಾರಂಟಿ ಯೋಜನೆಗಳಿಂದ ಬಡತನ ನಿರ್ಮೂಲನೆಗೆ ಸಹಾಯ-ಸಚಿವ ಡಾ. ಎಚ್.ಕೆ. ಪಾಟೀಲ**

# ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರ ಆರ್ಥಿಕ ಸ್ವಾವಲಂಬನೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿ ಮಾಡುವ ಕಾರ್ಯ ನಡೆಯುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಗದಗ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವತಿಯಿಂದ ಗದಗದ ಕಾಟನ್ ಸೇಲ್ ಸೊಸೈಟಿಯಲ್ಲಿ ಭಾನುವಾರ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಬಡತನವನ್ನು ಬೇರು ಸಮೇತ ಕಿತ್ತೊಗೆಯುವ ಕೆಲಸ ನಡೆಯುತ್ತಿದೆ. ಮುಂದಿನ ದಿನಗಳಲ್ಲಿ ಈ ಯೋಜನೆಗಳು ಮಾನವ ಹಕ್ಕುಗಳಾಗಿ ಪರಿಗಣಿಸಲ್ಪಡುವಂತಹ ಕಾನೂನು ರೂಪುಗೊಳ್ಳಬೇಕು ಎಂದು ಅವರು ಹೇಳಿದರು.

12ನೇ ಶತಮಾನದಲ್ಲೇ ಬಸವಣ್ಣನವರು ಮಹಿಳೆಯರಿಗೆ ಸಮಾನತೆ ಹಾಗೂ ಸ್ವಾತಂತ್ರ್ಯ ದೊರಕಬೇಕು ಎಂದು ಹೋರಾಟ ನಡೆಸಿದ್ದರು. ಸಮಾಜದಲ್ಲಿ ಮಹಿಳೆಯರಿಗೆ ಸಮಾನ ಅವಕಾಶ ಸಿಗುವಂತೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು ಎಂದು ಅವರು ತಿಳಿಸಿದರು.

1. ಗದಗದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ
2. ಪಂಚ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರ ಆರ್ಥಿಕ ಸ್ವಾವಲಂಬನೆ
3. ಗದಗ ಜಿಲ್ಲೆಗೆ ಗ್ಯಾರಂಟಿ ಯೋಜನೆಗಳ ಮೂಲಕ ರೂ.2130 ಕೋಟಿ ಅನುದಾನ
4. ಮಹಿಳೆಯರ ವಾರ್ಷಿಕ ತಲಾ ಆದಾಯದಲ್ಲಿ ರೂ.2 ಲಕ್ಷಕ್ಕಿಂತ ಹೆಚ್ಚು ಹೆಚ್ಚಳ



ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಮಹಿಳೆ ಮಗಳಾಗಿ, ಸಹೋದರಿಯಾಗಿ, ಹೆಂಡತಿಯಾಗಿ, ತಾಯಿಯಾಗಿ ಸೇರಿದಂತೆ ಹಲವು ಪಾತ್ರಗಳನ್ನು ಸಮರ್ಥವಾಗಿ ನಿಭಾಯಿಸುವ ಸಾಮರ್ಥ್ಯ ಹೊಂದಿದ್ದಾಳೆ ಎಂದರು.

ಚುನಾವಣೆಗೆ ಮೊದಲು ನೀಡಿದ ಭರವಸೆಯಂತೆ ಸರ್ಕಾರ ಅಧಿಕಾರಕ್ಕೆ ಬಂದ ಆರು ತಿಂಗಳೊಳಗೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಗದಗ ಜಿಲ್ಲೆಗೆ ಗೃಹಲಕ್ಷ್ಮೀ ಯೋಜನೆಯಡಿ ರೂ. 1135 ಕೋಟಿ, ಅನ್ನಭಾಗ್ಯ ಯೋಜನೆಯಡಿ ರೂ. 216 ಕೋಟಿ, ಶಕ್ತಿ ಯೋಜನೆಯಡಿ ರೂ. 475 ಕೋಟಿ ಹಾಗೂ ಯುವನಿಧಿ ಯೋಜನೆಯಡಿ ರೂ. 15 ಕೋಟಿ ಸೇರಿ ಒಟ್ಟು ರೂ. 2130 ಕೋಟಿ ಅನುದಾನ ಬಂದಿದೆ ಎಂದು ಮಾಹಿತಿ ನೀಡಿದರು.

> "ಮಹಿಳೆಯರನ್ನು ಮಾತೃಭೂಮಿಯಂತೆ ಗೌರವಿಸುವ ಸಂಸ್ಕೃತಿ ನಮ್ಮ ದೇಶದ್ದು. ಮಾಜಿ ಪ್ರಧಾನಿ ಇಂದಿರಾ ಗಾಂಧಿ 17 ವರ್ಷ ದೇಶವನ್ನು ಸಮರ್ಥವಾಗಿ ಮುನ್ನಡೆಸಿರುವುದು ಮಹಿಳೆಯರಲ್ಲಿರುವ ಅಪಾರ ಶಕ್ತಿಗೆ ಉದಾಹರಣೆ. ಮಹಿಳೆಯರ ಆರ್ಥಿಕ ಅಭಿವೃದ್ಧಿಗಾಗಿ ಸರ್ಕಾರ ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿದೆ."
> – ಜಿ.ಎಸ್. ಪಾಟೀಲ, ರೋಣ ಶಾಸಕ.

ಈ ಯೋಜನೆಗಳಿಂದ ಮಹಿಳೆಯರ ವಾರ್ಷಿಕ ತಲಾ ಆದಾಯದಲ್ಲಿ ರೂ. 2 ಲಕ್ಷಕ್ಕಿಂತ ಹೆಚ್ಚು ಹೆಚ್ಚಳವಾಗಿದ್ದು ಮಹಿಳೆಯರ ಆರ್ಥಿಕ ಸದೃಢತೆ ಸಾಧ್ಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ತಮ್ಮ ಅನುಭವಗಳನ್ನು ಹಂಚಿಕೊಂಡು ಯೋಜನೆಗಳಿಂದ ಜೀವನದಲ್ಲಿ ಆಗಿರುವ ಬದಲಾವಣೆಗಳನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಡಿ.ಆರ್. ಪಾಟೀಲ, ಅಕ್ಬರಸಾಬ ಬಬರ್ಚಿ, ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ಪ್ರಕಾಶ ಆಕಳವಾಡಿ, ನೀಲಮ್ಮ ಬೋಳನವರ, ಶಕುಂತಲಾ ಅಕ್ಕಿ, ಸೋಮನಕಟ್ಟಿ ಸೇರಿದಂತೆ ಗ್ಯಾರಂಟಿ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಸಹಾಯಕ ಆಯುಕ್ತ ಗಂಗಪ್ಪ ಸೇರಿದಂತೆ

---

**ವೀರಶೈವ ಪಂಚಪೀಠಗಳ ಸಾನ್ನಿಧ್ಯದಲ್ಲಿ ಮೂರು ದಿನಗಳ ಧಾರ್ಮಿಕ ಉಪನ್ಯಾಸ, ಗ್ರಂಥ ಬಿಡುಗಡೆ ಕಾರ್ಯಕ್ರಮ**

# ಮಾರ್ಚ್ 23, 25ರಂದು ದಾವಣಗೆರೆಯಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ



**ಯುಗಮಾನೋತ್ಸವದ ಪ್ರಮುಖ ಕಾರ್ಯಕ್ರಮಗಳು**

1. ಮಾರ್ಚ್ 23, 25: ಮೂರು ದಿನಗಳ ಸಮಾರಂಭ
2. ವೀರಶೈವ ಪಂಚ ಸೂತ್ರಗಳ ಕುರಿತು ಉಪನ್ಯಾಸ
3. ಪಂಚಪೀಠಾಧೀಶ್ವರರ ಸಾನ್ನಿಧ್ಯ
4. ಅಮೂಲ್ಯ ಗ್ರಂಥ ಬಿಡುಗಡೆ
5. ಧರ್ಮ ಸಂದೇಶ ಹಾಗೂ ಗಣ್ಯರ ಉಪಸ್ಥಿತಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವೀರಶೈವ ಧರ್ಮದ ಪಂಚಪೀಠಗಳ ವತಿಯಿಂದ ಪ್ರತಿ ವರ್ಷ ಯುಗಾದಿ ಹೊಸ ವರ್ಷದ ಅಂಗವಾಗಿ ಆಚರಿಸಲಾಗುವ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಈ ವರ್ಷ ಮಾರ್ಚ್ 23, 24 ಮತ್ತು 25ರಂದು ದಾವಣಗೆರೆ ಮಹಾನಗರದಲ್ಲಿ ನಡೆಯಲಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಸ್ವಾಮಿಗಳು ತಿಳಿಸಿದ್ದಾರೆ.

ಬೆಂಗಳೂರಿನ ಜೆ.ಪಿ.ನಗರದ ಶ್ರೀ ಸೋಮೇಶ್ವರ ಸಭಾಭವನದಲ್ಲಿ ನಡೆದ ಪೂರ್ವಭಾವಿ ಸಮಾವೇಶದಲ್ಲಿ ಮಾತನಾಡಿದ ಅವರು, ವೀರಶೈವ ಧರ್ಮದ ಸೈದ್ಧಾಂತಿಕ ತತ್ವಗಳನ್ನು ಸಮಾಜಕ್ಕೆ ಪರಿಚಯಿಸುವ ಉದ್ದೇಶದಿಂದ ಈ ಸಮಾರಂಭ ಆಯೋಜಿಸಲಾಗಿದೆ ಎಂದರು.

ಮೂರು ದಿನಗಳ ಸಮಾರಂಭದಲ್ಲಿ ವೀರಶೈವ ಧರ್ಮದ ಪಂಚ ಸೂತ್ರಗಳ ಕುರಿತು ವಿಶೇಷ ಉಪನ್ಯಾಸಗಳು ನಡೆಯಲಿವೆ. ಮೊದಲ ದಿನ ಶಿವಗಂಗಾ ಕ್ಷೇತ್ರದ ಡಾ. ಮಲಯ ಶಾಂತಮುನಿ ಶಿವಾಚಾರ್ಯ ಸ್ವಾಮಿಗಳು, ಎರಡನೇ ದಿನ ನರೇಗಲ್‌ಸವದತ್ತಿ ಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಹಾಗೂ ಮೂರನೇ ದಿನ ವಿಜಯವಾಣಿ ಹಿರಿಯ ವರದಿಗಾರ ಪ್ರಶಾಂತ್ ರಿಪ್ಪನ್‌ಪೇಟೆ ಉಪನ್ಯಾಸ ನೀಡಲಿದ್ದಾರೆ.

ಸಮ್ಮೇಳನದ ಸರ್ವಾಧ್ಯಕ್ಷರಾಗಿ ಮಹಾರಾಷ್ಟ್ರದ ಗೌಡಗಾವ್ ಹಿರೇಮಠದ ಡಾ. ಜಯಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳನ್ನು ನಿಯುಕ್ತಿಗೊಳಿಸಲಾಗಿದೆ. ಈ ಸಂದರ್ಭದಲ್ಲಿ ವೀರಶೈವ ಪಂಚಸೂತ್ರಗಳ ಕುರಿತು ರಚಿಸಲಾದ ಅಮೂಲ್ಯ ಕೃತಿಯನ್ನು ಅಮೆರಿಕದ ಷಿಕಾಗೋ ಮೂಲದ ರವಿ ಹಂಜ್ ಬಿಡುಗಡೆ ಮಾಡಲಿದ್ದಾರೆ. ಗ್ರಂಥ ಪರಿಚಯವನ್ನು ಸಾಹಿತಿ ಡಾ. ಸಿ. ಶಿವಕುಮಾರ್ ಮಾಡಲಿದ್ದಾರೆ.

> "ಸಕಲ ಜೀವಾತ್ಮರ ಒಳಿತಿಗಾಗಿ ವೀರಶೈವ ಧರ್ಮದ ಸೈದ್ಧಾಂತಿಕ ತತ್ವಗಳನ್ನು ಸಮಾಜಕ್ಕೆ ತಿಳಿಸುವ ಉದ್ದೇಶದಿಂದ ಈ ಯುಗಮಾನೋತ್ಸವ ಆಯೋಜಿಸಲಾಗಿದೆ."
> – **ಡಾ. ವೀರಸೋಮೇಶ್ವರ** ಶಿವಾಚಾರ್ಯ ಸ್ವಾಮಿಗಳು, ರಂಭಾಪುರಿ ಜಗದ್ಗುರು.

ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ, ಉಜ್ಜಯಿನಿ, ಶ್ರೀಶೈಲ ಮತ್ತು ಕಾಶಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಧರ್ಮ ಸಂದೇಶಗಳು ನಡೆಯಲಿವೆ. ವಿವಿಧ ರಾಜಕೀಯ ಹಾಗೂ ಸಮಾಜದ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಜಗದ್ಗುರುಗಳು ತಿಳಿಸಿದರು.

---

# ದೇಶಪಾಂಡೆ ಫೌಂಡೇಷನ್ ವತಿಯಿಂದ ವಿದ್ಯಾರ್ಥಿಗಳ ಪ್ರತಿಭೆ ಅನಾವರಣ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಅಬ್ಬಿಗೇರಿ ಗ್ರಾಮದ ಕನ್ನಡ ಹಿರಿಯ ಹೆಣ್ಣು ಮಕ್ಕಳ ಶಾಲೆಯಲ್ಲಿ ಸೋಮವಾರ ದೇಶಪಾಂಡೆ ಫೌಂಡೇಷನ್‌ನ ಸ್ಕಿಲ್ ಇನ್ ವಿಲೇಜ್ (ಎಸ್.ಐ.ವಿ) ಕಾರ್ಯಕ್ರಮದ ವತಿಯಿಂದ ವಿದ್ಯಾರ್ಥಿಗಳ ಪ್ರತಿಭೆ ಅನಾವರಣಗೊಳಿಸುವ ಎಸ್.ಐ.ವಿ ಎಕ್ಸ್‌ಪೋ ಮತ್ತು ಪದವಿ ಪ್ರಧಾನ ಸಮಾರಂಭ ಜರುಗಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ತಾವು ಕಲಿತ ವಿಷಯಗಳ ಕುರಿತು ಆಕರ್ಷಕ ಮಾದರಿಗಳನ್ನು ತಯಾರಿಸಿ, ಅವುಗಳ ಬಗ್ಗೆ ಸ್ಪಷ್ಟವಾಗಿ ಇಂಗ್ಲಿಷ್ ಭಾಷೆಯಲ್ಲಿ ವಿವರಣೆ ನೀಡುವ ಮೂಲಕ ನೆರೆದಿದ್ದವರ ಗಮನ ಸೆಳೆದರು. ಗ್ರಾಮೀಣ ಭಾಗದ ಮಕ್ಕಳು ಇಂಗ್ಲಿಷ್‌ನಲ್ಲಿ ಆತ್ಮವಿಶ್ವಾಸದಿಂದ ಮಾತನಾಡುತ್ತಿರುವುದನ್ನು ಕಂಡು ಪೋಷಕರು ಹಾಗೂ ಸಾರ್ವಜನಿಕರು ಹರ್ಷ ವ್ಯಕ್ತಪಡಿಸಿದರು.




ಶಿಕ್ಷಣ ಕ್ಷೇತ್ರದಲ್ಲಿನ ಸೇವೆಯನ್ನು ಗುರುತಿಸಿ ನರೇಗಲ್ ಕ್ಲಸ್ಟರ್ ಹೆಡ್ ಮಂಜುನಾಥ ಬಡಿಗೇರ ಹಾಗೂ ತರಬೇತುದಾರರಾದ ಆಶಿಕಾ ಕೆ. ಅವರನ್ನು ಶಾಲೆಯ ಎಸ್‌ಡಿಎಂಸಿ ವತಿಯಿಂದ ಸನ್ಮಾನಿಸಲಾಯಿತು.

ಶಾಲೆಯ ಮುಖ್ಯಶಿಕ್ಷಕ ಡಿ.ಎಚ್. ಪರಂಗಿ ಮಾತನಾಡಿ, ದೇಶಪಾಂಡೆ ಫೌಂಡೇಷನ್ ನೀಡುತ್ತಿರುವ ಇಂತಹ ಕೌಶಲ್ಯಾಧಾರಿತ ಶಿಕ್ಷಣವು ಗ್ರಾಮೀಣ ಭಾಗದ ಮಕ್ಕಳಲ್ಲಿ ಕಲಿಕೆಯ ಆಸಕ್ತಿಯನ್ನು ಹೆಚ್ಚಿಸಿದೆ ಎಂದು ಹೇಳಿದರು.

ನರೇಗಲ್ ಕ್ಲಸ್ಟರ್ ಹೆಡ್ ಮಂಜುನಾಥ ಬಡಿಗೇರ ಕಾರ್ಯಕ್ರಮದ ಕುರಿತು ಮಾತನಾಡಿದರು.

ಶಿಕ್ಷಣ ಕ್ಷೇತ್ರದಲ್ಲಿನ ಸೇವೆಯನ್ನು ಗುರುತಿಸಿ ನರೇಗಲ್ ಕ್ಲಸ್ಟರ್ ಹೆಡ್ ಮಂಜುನಾಥ ಬಡಿಗೇರ ಹಾಗೂ ಅಬ್ಬಿಗೇರಿ ಕೇಂದ್ರದ ತರಬೇತುದಾರರಾದ ಆಶಿಕಾ ಕೆ. ಅವರನ್ನು ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕ ವೃಂದ, ಎಸ್‌ಡಿಎಂಸಿ ಪದಾಧಿಕಾರಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

---

# ಮಹಿಳೆಯರಿಂದ ಸಾಂಪ್ರದಾಯಿಕ ಹೋಳಿ ಹಬ್ಬ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದಲ್ಲಿ ಪ್ರಸಿದ್ಧವಾದ ಸಾಂಪ್ರದಾಯಿಕ ಹೋಳಿ ಹಬ್ಬವನ್ನು ಗದಗ ನಗರದಲ್ಲಿ ಮಹಿಳೆಯರು ವಿಜೃಂಭಣೆಯಿಂದ ಆಚರಿಸಿದರು. ಗಂಗಾಪುರ ಪೇಟೆ ಹಾಗೂ ಖಾನತೋಟ ಓಣಿ ಪ್ರದೇಶಗಳಲ್ಲಿ ನೂರಾರು ಮಹಿಳೆಯರು ನೀರಿನ ಹಬ್ಬದ ರೂಪದಲ್ಲಿ ಹೋಳಿ ಆಚರಣೆಯಲ್ಲಿ ಪಾಲ್ಗೊಂಡರು.



> "ನಮ್ಮ ಸನಾತನ ಹಿಂದೂ ಧರ್ಮದ ಪ್ರತಿಯೊಂದು ಹಬ್ಬಕ್ಕೂ ಅದರದೇ ಆದ ಇತಿಹಾಸ ಮತ್ತು ಮಹತ್ವವಿದೆ. ಆದ್ದರಿಂದ ಹಿಂದೂ ಸಂಸ್ಕೃತಿಯ ಪ್ರತಿಯೊಂದು ಹಬ್ಬವನ್ನು ಎಲ್ಲರೂ ಸಂಭ್ರಮದಿಂದ ಆಚರಿಸಬೇಕು."
> – **ರೇಣುಕಾ ಟಿ. ಕಬಾಡಿ**

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ರಾಜರಾಜೇಶ್ವರಿ ಮಹಿಳಾ ಮಂಡಳದ ಅಧ್ಯಕ್ಷೆ ಶ್ರೀಮತಿ ರೇಣುಕಾ ಟಿ. ಕಬಾಡಿ, ಗದಗ ನಗರದ ಕಾಮ-ರತಿ ಮೆರವಣಿಗೆಯನ್ನು ನೋಡಲು ಹಾಗೂ ಹೋಳಿ ಹಬ್ಬ ಆಚರಿಸಲು ರಾಜ್ಯದ ವಿವಿಧ ಭಾಗಗಳಿಂದ ಜನರು ಬರುತ್ತಾರೆ ಎಂದು ಹೇಳಿದರು. ಕಿಲ್ಲಾ ಓಣಿಯ ಕಾಮ-ರತಿ ಬಂಗಾರದ ಅಲಂಕಾರದಿಂದ ಕಂಗೊಳಿಸುವುದು ನೋಡಲು ಎರಡು ಕಣ್ಣು ಸಾಲದು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ನೂರಾರು ಮಹಿಳೆಯರು ಹೋಳಿ ಹಬ್ಬದ ಆಚರಣೆಯಲ್ಲಿ ಭಾಗವಹಿಸಿದ್ದರು.

---

**ಖಾನಾಪೂರ ಗ್ರಾಮದಲ್ಲಿ 50ನೇ ವರ್ಷದ ಶ್ರೀ ಶರಣಬಸವೇಶ್ವರ ಪುರಾಣ ಕಾರ್ಯಕ್ರಮದಲ್ಲಿ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ**

# ಸಾಮೂಹಿಕ ವಿವಾಹ ಸಮಾಜಕ್ಕೆ ಆದರ್ಶ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸಾಮೂಹಿಕ ವಿವಾಹಗಳು ದುಂದು ವೆಚ್ಚಕ್ಕೆ ಕಡಿವಾಣ ಹಾಕುವುದಲ್ಲದೆ, ನೆಮ್ಮದಿಯ ಜೀವನಕ್ಕೆ ನಾಂದಿ ಹಾಡುತ್ತವೆ. ಕಳೆದ 50 ವರ್ಷಗಳಿಂದ ಖಾನಾಪೂರದಲ್ಲಿ ಶ್ರೀ ಶರಣಬಸವೇಶ್ವರ ಪುರಾಣ ಪ್ರವಚನ ಕಾರ್ಯಕ್ರಮ ನಡೆಯುತ್ತಿರುವುದು ಶ್ಲಾಘನೀಯ ಎಂದು ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಅವರು ಶಿರಹಟ್ಟಿ ಸಮೀಪದ ಖಾನಾಪೂರ ಗ್ರಾಮದಲ್ಲಿ ಕಲಬುರ್ಗಿಯ ಶ್ರೀ ಶರಣಬಸವೇಶ್ವರ ಪುರಾಣದ 50ನೇ ವರ್ಷದ ಸುವರ್ಣ ಮಹೋತ್ಸವದ ನಿಮಿತ್ತ




ಆಯೋಜಿಸಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಗ್ರಾಮದ ಸರ್ವ ಸಮುದಾಯದವರು ಒಗ್ಗಟ್ಟಾಗಿ ಇಂತಹ ಕಾರ್ಯಕ್ರಮ ನಡೆಸಿ ಇತರರಿಗೆ ಮಾದರಿಯಾಗಿದ್ದಾರೆ. ದಾಂಪತ್ಯ ಜೀವನಕ್ಕೆ ಕಾಲಿಡುವ ವಧು-ವರರು ಪರಸ್ಪರ ಪ್ರೀತಿ, ವಿಶ್ವಾಸದಿಂದ ಜೀವನ ಸಾಗಿಸಬೇಕು. ಇಂದಿನ ದುಬಾರಿ ಜೀವನದಲ್ಲಿ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಮದುವೆ ಮಾಡುವುದು ಕಷ್ಟಸಾಧ್ಯವಾಗಿದೆ. ಇಂತಹ ಸಾಮೂಹಿಕ ವಿವಾಹಗಳು ಬಡ-ಶ್ರೀಮಂತ ಎಂಬ ಭೇದವಿಲ್ಲದೆ ಎಲ್ಲರೂ ಒಂದೇ ಎಂಬ ಭಾವನೆ ಮೂಡಿಸುತ್ತವೆ. ಮುಂದಿನ ದಿನಗಳಲ್ಲಿಯೂ ಇಂತಹ ಸಾಮಾಜಿಕ ಕಳಕಳಿಯ ಕಾರ್ಯಕ್ರಮಗಳು ನಡೆಯಲಿ ಎಂದು ಆಶಿಸಿದರು.

ಕೆಪಿಸಿಸಿ ಪ್ರಚಾರ ಸಮಿತಿ ಸದಸ್ಯೆ ಸುಜಾತಾ ದೊಡ್ಡಮನಿ ಮಾತನಾಡಿದರು. ಸುರೇಶ ಅಕ್ಕಿ, ಶಿವಮೂರ್ತೆಯ್ಯ ಹಿರೇಮಠ, ರಾಜಶೇಖರ ಹಿರೇಮಠ, ಅಶೋಕ ಮಡಿವಾಳರ, ಇಸ್ಮಾಯಿಲ್‌ಸಾಬ ತಹಶೀಲ್ದಾರ, ರುದ್ರಪ್ಪ ಕರಮುಡಿ, ಪ್ರಕಾಶ ರಡ್ಡೇರ, ಪಂಚಾಕ್ಷರಿ ಹೊಸಮಠ, ಬಸವರಾಜ ಹಲಸೂರ, ರಾಮಣ್ಣ ಗಾಬರಿ, ದ್ಯಾಮಣ್ಣ ಬಂಗಿ, ಪಂಚಪ್ಪ ಹಲಸೂರ, ಮಾಂತೇಶ ಪವಾಡಶೆಟ್ಟರ, ಚಂದ್ರಣ್ಣ ರಡ್ಡೇರ, ಫಕ್ಕೀರೇಶ ಗಾಣಿಗೇರ, ಇಮಾಮ್‌ಸಾಬ ಟಪಾಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

# ಬ್ರಾಹ್ಮಣ ಮಕ್ಕಳಲ್ಲಿ ಸಮಾಜದ ಬಗ್ಗೆ ಪ್ರೀತಿ ಹುಟ್ಟಿಸಿ, ಸಂಘಟನೆಯ ಶಕ್ತಿ ಪ್ರದರ್ಶಿಸೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

"ಬ್ರಾಹ್ಮಣ ಸಮಾಜದ ಮಕ್ಕಳಲ್ಲಿ ಸಮಾಜದ ಬಗ್ಗೆ ಪ್ರೀತಿ ಮೂಡಿಸುವ ಕಾರ್ಯ ಅತ್ಯಂತ ಅಗತ್ಯ. ಶಿಸ್ತು ಬದ್ಧ ಜೀವನ, ಸಂಸ್ಕಾರ ಸಂಸ್ಕೃತಿಗಳನ್ನು ಅಳವಡಿಸಿಕೊಂಡು ಸಮಾಜಕ್ಕೆ ಉತ್ತಮ ಸಂದೇಶ ನೀಡುವುದು ನಮ್ಮ ಹೊಣೆ," ಎಂದು ಗದಗ ಜಿಲ್ಲಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಹೇಳಿದರು.

ಪಟ್ಟಣದ ಶಂಕರಭಾರತಿಮಠದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, "ಸಮಾಜದಲ್ಲಿ ವಿವಾಹ, ಉದ್ಯೋಗ ಸೇರಿದಂತೆ ಅನೇಕ ಸಮಸ್ಯೆಗಳಿವೆ. ಅವುಗಳಿಗೆ ಪರಿಹಾರ ಕಂಡು ಕೊಳ್ಳುವುದು ನಮ್ಮಲ್ಲಿಯೇ ಇದೆ. ಬ್ರಾಹ್ಮಣ ನಿಗಮ ಮಂಡಳಿ ಸ್ವಯಂ ಉದ್ಯೋಗ ಮಾಡುವವರಿಗೆ ಮತ್ತು ಶಿಕ್ಷಣಕ್ಕಾಗಿ



ವಿವಿಧ ಆರ್ಥಿಕ ಸಹಾಯಗಳನ್ನು ಒದಗಿಸುತ್ತಿದೆ. ಅವುಗಳನ್ನು ಸದುಪಯೋಗಪಡಿಸಿಕೊಳ್ಳುವುದು ಅತ್ಯಗತ್ಯ. ಜಿಲ್ಲೆಯಲ್ಲಿ ವಿವಾಹ ಸಂಬಂಧಿ ಸಮಸ್ಯೆಗಳಿಗೆ ಪರಿಹಾರ ನೀಡಲು ವಧು-ವರರ ಯೋಚನೆಯೂ ಮುಂದಾಗಿದೆ ಎಂದರು.

ಇದೇ ವೇಳೆ, ಶ್ರೀಕ್ಷೇತ್ರ ಶೃಂಗೇರಿನಲ್ಲಿ ಮಾರ್ಚ್ 21ರಂದು ನಡೆಯಲಿರುವ ಜಗದ್ಗುರು ವರ್ದಂತಿ ಉತ್ಸವದ ಗಾಯತ್ರಿ ಜಪಾನುಷ್ಠಾನದಲ್ಲಿ ಗದಗ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಅವರು ಆಹ್ವಾನಿಸಿದರು.

ಗದಗ ಜಿಲ್ಲಾ ಶಾಂಕರ ತತ್ವ ಪ್ರಸಾರ ಸಂಚಾಲಕ ಗಿರೀಶ ಪಂತರ ಮಾತನಾಡಿ, "ಇಂದಿನ ದಿನಗಳಲ್ಲಿ ಹಿಂದೂ ಧರ್ಮ ಅಧೋಗತಿಯತ್ತ ಸಾಗುತ್ತಿದೆ. ಇದನ್ನು ತಡೆಯಲು ಶೃಂಗೇರಿ ಜಗದ್ಗುರುಗಳು ಅನೇಕ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಯುವಕರು, ಹಿರಿಯರು ಮತ್ತು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಿ ಮತ್ತು ಕಾರ್ಯಕ್ರಮ ಯಶಸ್ವಿಯಾಗಲಿ," ಎಂದು ಮನವಿ ಮಾಡಿದರು.

> ಲಕ್ಷ್ಮೇಶ್ವರ ತಾಲೂಕ ಬ್ರಾಹ್ಮಣ ಸಮಾಜದ ಅಧ್ಯಕ್ಷ ಕೃಷ್ಣ ಕುಲಕರ್ಣಿ ಮತ್ತು ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್ ಮಾತನಾಡಿ, "ಬ್ರಾಹ್ಮಣ ಸಮಾಜದವರು ಸಂಘಟಿತರಾಗಬೇಕು. ಸಮಾಜದ ಬಗ್ಗೆ ಚಿಂತನೆ ಮಾಡುವುದು, ಸ್ವಾಭಿಮಾನದಿಂದ ಜೀವನ ನಡೆಸುವುದು ಮತ್ತು ಸಂಘಟನೆಯ ಶಕ್ತಿಯನ್ನು ತೋರಿಸುವುದು ಅತ್ಯಗತ್ಯ," ಎಂದು ತಿಳಿಸಿದ್ದಾರೆ.

ಸಭೆಯಲ್ಲಿ ಅನಂತಭಟ್ ಪೂಜಾರ, ಅನಿಲ ತೆಂಬದಮನಿ, ಆರ್.ಎಸ್. ಕುಲಕರ್ಣಿ, ಗಣೇಶ ಕುರಂದವಾಡ, ಶ್ರೀಪಾದ ತಮ್ಮಣ್ಣವರ, ಡಾ. ಪ್ರಸನ್ನ ಕುಲಕರ್ಣಿ, ದೃವ ಬೆಟಗೇರಿ, ದತ್ತಾತ್ರೇಯ ಪಾಟೀಲಕುಲಕರ್ಣಿ, ಅನಿಲ ಕುಲಕರ್ಣಿ, ಸರ್‌ದೇಶಪಾಂಡೆ, ವ್ಯಾಪಾರಿ, ಆನಂದ ತಂತ್ರಿ, ಎ.ಪಿ. ಕುಲಕರ್ಣಿ, ಪಾಪು ಪುರೋಹಿತ, ಶ್ರೀಕಾಂತ ಪೂಜಾರ ಮುಂತಾದವರು ಉಪಸ್ಥಿತರಿದ್ದರು. ಕಾರ್ಯದರ್ಶಿ ದಿಗಂಬರ ಪೂಜಾರ ಕಾರ್ಯಕ್ರಮವನ್ನು ನಿರೂಪಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka